**<u>ಹೆಚ್ಚುವರಿ ಸಿವಿಲ್ ಮತ್ತು  ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿಸಿ  ನಂ. 805/2021**

| | | | |
|---|---|---|---|
| **ಹೆಸರು** | **:** | **ತಿಮ್ಮಯ್ಯ** | ಚಾ.ಸಾ.18 |
| **ತಂದೆಯ  ಹೆಸರು** | **:** | **ಬಾಲಯ್ಯ** | ಪ್ರಾ.ಸಾ. 8 |
| **ವಯಸ್ಸು** | **:** | **31 ವರ್ಷ** | ದಿನಾಂಕಃ 10-09-2024 |
| **ಉದ್ಯೋಗ** | **:** | **ಪಿ.ಎಸ.ಐ** | |
| **ವಾಸಸ್ಥಳ** | **:** | **ಕಾಳಗಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕಃ 31-10-2019 ರಿಂದ 30-11-2020 ರವರೆಗೆ ನಾನು ಸುಲೇಪೇಟ ಪೋಲಿಸ ಠಾಣೆಯಲ್ಲಿ PSI ಆಗಿ ಕಾರ್ಯನಿರ್ವಹಿಸಿದ್ದೇನೆ.

ದಿನಾಂಕಃ 10-10-2020 ರಂದು ಬೆಳಿಗ್ಗೆ 6-30 ಗಂಟೆಗೆ ಪ್ರಾಸಾ 1 ರವರು ನಮ್ಮ ಠಾಣೆಗೆ ಹಾಜರಾಗಿ ಒಂದು ಹೇಳಿಕೆಯ ದೂರನ್ನು ನೀಡಿ ಸದರಿ ದೂರಿನ ಸಾರಾಂಶದ ಮೇರೆಗೆ ಠಾಣೆ ಗುನ್ನೆ ಸಂಖ್ಯೆಃ 74/2020 ರಲ್ಲಿ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿದ್ದೇನೆ. ಸದರಿ ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದೆ. ನಿಪಿ-1 ರಲ್ಲಿರುವ ನನ್ನ ಸಹಿಗಳನು ನಿಪಿ-1(ಎ) ಮತ್ತು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಈಗ ನೋಡುತ್ತಿದ್ದು ಅದನ್ನು ಈಗ ನಿಪಿ-17 ಎಂದು ಗುರುತಿಸಲಾಯಿತು. ನಂತರ ಮುಂದಿನ ತನಿಖೆಗಾಗಿ ಪ್ರಕರಣದ ಕಡತವನ್ನು ಪ್ರಾಸಾ 6 ರವರಿಗೆ ಸಲ್ಲಿಸಿದ್ದೇನೆ.

**<u>ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ SAS ವಕೀಲರಿಂದಃ</u>**

ನಿಪಿ-1 ನ್ನು ಟೈಪಮಾಡಲಾಗಿದೆ ಎಂದರೆ ಸರಿ. ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಸುಳ್ಳು ದೂರನ್ನು ಪಡೆದಿದ್ದೇವೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲಾ**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**C/C ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**